# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 983(948)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ. ಕೆ. ಹರಿಪ್ರಸಾದ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ರಾಜ್ಯದ ನದಿಗಳ ನೀರು ಕಲುಷಿತವಾಗುತ್ತಿರುವ ಬಗ್ಗೆ

(ಅ) ರಾಜ್ಯದ ಎಷ್ಟು ನಗರ, ಪಟ್ಟಣ, ಹಳ್ಳಿಗಳಲ್ಲಿ, ಊರಿನ ಹಾಗೂ ಕೈಗಾರಿಕೆಗಳ ತ್ಯಾಜ್ಯ ಕಲುಷಿತ ನೀರು ನದಿಗೆ ಸೇರುತ್ತದೆ; ಈ ಬಗ್ಗೆ ಪರಿಸರ ಇಲಾಖೆಯಿಂದ ಸಮೀಕ್ಷೆ ನಡೆಸಲಾಗಿದೆಯೇ;

(ಆ) ಈ ರೀತಿ ಕಲುಷಿತ ತ್ಯಾಜ್ಯದ ನೀರನ್ನು ನದಿಗಳಿಗೆ ಬಿಡುವ ಪುರಸಭೆ, ಸ್ಥಳೀಯ ಸಂಸ್ಥೆ ಹಾಗೂ ಕಾರ್ಖಾನೆಗಳಿಗೆ ಪರಿಸರ ಇಲಾಖೆಯಿಂದ, ಪರಿಸರ ಮಂಡಲಿಯಿಂದ (ಪೊಲ್ಯೂಷನ್ ಕಂಟ್ರೋಲ್ ಬೋರ್ಡ್) ನೋಟೀಸ್ ನೀಡಲಾಗಿದೆಯೇ ;

(ಇ) ಕಲುಷಿತ ನೀರನ್ನು ಹಾಗೂ ತ್ಯಾಜ್ಯವನ್ನು ನದಿಗೆ ಬಿಡದಂತೆ ತಡೆಯಲು ಕೈಗೊಂಡಿರುವ ಕ್ರಮಗಳೇನು; ನದಿಪಾತ್ರಗಳ ಸ್ವಚ್ಛತೆಗೆ ಕ್ರಮ ತೆಗೆದುಕೊಳ್ಳಲಾಗಿದೆಯೇ?